ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಜುಲೈ 28 , 2014

## ಪತ್ರಿಕಾ ಪ್ರಕಟಣೆ

## ಬೆಳಗಾವಿ ಗಡಿಯಲ್ಲಿ ಶಾಂತ ಪರಿಸ್ಥಿತಿ : ಮುಖ್ಯಮಂತ್ರಿ

**ಬೆಂಗಳೂರು, ಜುಲೈ 28 (ಕರ್ನಾಟಕ ವಾರ್ತೆ) :**

ಬೆಳಗಾವಿ ಜಿಲ್ಲೆಯ ಗಡಿ ಭಾಗವಾದ ಎಳ್ಳೂರು ಗ್ರಾಮದಲ್ಲಿ ಹಾಕಿದ್ದ ಮರಾಠಿ ನಾಮಫಲಕವನ್ನು ರಾಜ್ಯ ಉಚ್ಛ ನ್ಯಾಯಾಲಯದ ನಿರ್ದೇಶನದಂತೆ ತೆರವುಗೊಳಿಸಿದ ಹಿನ್ನೆಲೆಯಲ್ಲಿ ಉಂಟಾಗಿದ್ದ ಉದ್ವಿಗ್ನ ಪರಿಸ್ಥಿತಿ ಇದೀಗ ಶಾಂತವಾಗಿದೆ ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಇಲ್ಲಿ ಇಂದು ತಿಳಿಸಿದರು.

ಕಳೆದ ಎರಡು ದಿನಗಳಿಂದ ಗಡಿಯಲ್ಲಿ ಉಂಟಾಗಿದ್ದ ಅಶಾಂತ ವಾತಾವರಣ ಇದೀಗ ಸಂಪೂರ್ಣ ಹತೋಟಿಯಲ್ಲಿದೆ ಎಂದು ಅವರು ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ರಾಜ್ಯ ಉಚ್ಛ ನ್ಯಾಯಾಲಯದ ನಿರ್ದೇಶನದಂತೆ ಎಳ್ಳೂರು ಗ್ರಾಮದಲ್ಲಿ ಹಾಕಿದ್ದ ಮರಾಠಿ ನಾಮಫಲಕವನ್ನು ಶನಿವಾರ ತೆರವುಗೊಳಿಸಿ, ಕನ್ನಡ ನಾಮಫಲಕವನ್ನು ಹಾಕಿಸಲಾಗಿತ್ತು. ಈ ನಾಮಫಲಕವನ್ನು ಎಂ ಇ ಎಸ್ ಬೆಂಬಲಿಗರು ಎನ್ನಲಾದ ಕಿಡಿಗೇಡಿಗಳು ಪುನಃ ನಾಶಪಡಿಸಿದರು. ಈ ವಿಷಯ ಕುರಿತಂತೆ ಗಡಿಭಾಗದಲ್ಲಿ ಉಂಟಾದ ಉದ್ವಿಗ್ನ ಪರಿಸ್ಥಿತಿಯನ್ನು ತಿಳಿಗೊಳಿಸಲು ಪೊಲೀಸರು ಲಘು ಲಾಠಿ ಪ್ರಹಾರ ಮಾಡಿ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದರು.

ಭಾರತೀಯ ದಂಡ ಪ್ರಕ್ರಿಯಾ ಸಂಹಿತೆಯ ಪರಿಚ್ಛೇಧ 144 ರ ಅನ್ವಯ ಜಿಲ್ಲಾಡಳಿತ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಪರಿಸ್ಥಿತಿ ಶಾಂತಿಯುತವಾಗಿದೆ ಎಂದು ಶ್ರೀ ಸಿದ್ದರಾಮಯ್ಯ ಅವರು ಹೇಳಿದರು.

**********

ಡಿ ಪಿ ಎಂ